ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹನ್ನೊಂದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 15ನೇ ಡಿಸೆಂಬರ್, 2021
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಸದಸ್ಯರಿಂದ ಪ್ರಮಾಣ ವಚನ/ಪ್ರತಿಜ್ಞಾ ವಚನ ಸ್ವೀಕಾರ

2. ಪ್ರಶ್ನೋತ್ತರ

ಅ)	ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಮೂರನೇ ಪಟ್ಟಿ
ಆ)	**ತಡೆಹಿಡಿಯಲಾದ ಪ್ರಶ್ನೆ:-**		
	ದಿನಾಂಕ: 14.12.2021ರ 2ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಬಸನಗೌಡ ದದ್ದಲ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 28(361)	:	ಮಾನ್ಯ ಅಬಕಾರಿ ಸಚಿವರು
ಈ)	ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಮೂರನೇ ಪಟ್ಟಿ

3. ಅರ್ಜಿಯನ್ನೊಪ್ಪಿಸುವುದು

ಶ್ರೀ ಆನಂದ್ ಅಲಿಯಾಸ್ ವಿಶ್ವನಾಥ್ ಚಂದ್ರಶೇಖರ ಮಾಮನಿ (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಈ ಕೆಳಕಂಡ ಅರ್ಜಿಯನ್ನು ಒಪ್ಪಿಸುವುದು:

ಎತ್ತಿನಹೊಳೆ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ.

... 2/ ..

4. ಶಾಸನ ರಚನೆ

I.ವಿಧೇಯಕವನ್ನು ಹಿಂಪಡೆಯುವುದು

ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:–

ಅ) 2018ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಹಿಂಪಡೆಯುವುದು.

II.ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಕೆಲವು ಇನಾಮುಗಳ ರದ್ದಿಯಾತಿ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ಶ್ರೀ ಬಿ.ಎ. ಬಸವರಾಜ (ಮಾನ್ಯ ನಗರಾಭಿವೃದ್ಧಿ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ವಿ. ಮುನಿಯಪ್ಪ, ಪಿ.ಟಿ. ಪರಮೇಶ್ವರ್ ನಾಯಕ್, ಟಿ. ರಘುಮೂರ್ತಿ, ಗಣೇಶ್ ಪ್ರಕಾಶ್ ಹುಕ್ಕೇರಿ ಹಾಗೂ ಇತರರು** – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆ, ರಸ್ತೆ, ಸೇತುವೆ, ಸರ್ಕಾರಿ ಕಟ್ಟಡಗಳು, ಸಾರ್ವಜನಿಕ ಮನೆಗಳು ಹಾನಿಯಾಗಿದ್ದು, ಜನ ಜಾನುವಾರುಗಳ ಪ್ರಾಣ ಹಾನಿಯಾಗಿರುವುದರಿಂದ ರೈತರು ಹಾಗೂ ರಾಜ್ಯದ ಜನತೆ ಸಂಕಷ್ಟದಲ್ಲಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

... 3/ ..

2) **ಶ್ರೀಯುತರುಗಳಾದ ಕೆ.ಎಂ. ಶಿವಲಿಂಗೇಗೌಡ, ಬೆಳ್ಳಿ ಪ್ರಕಾಶ್, ಆರ್. ಮಂಜುನಾಥ್, ಶ್ರೀಮತಿ ಕೆ. ಪೂರ್ಣಿಮ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಗೊಲ್ಲ ಸಮುದಾಯದ ಕಾಡುಗೊಲ್ಲ ಉಪ ಪಂಗಡಗಳನ್ನು ಎಸ್.ಟಿ. ಸಮುದಾಯಕ್ಕೆ ಸೇರಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಟಿ. ವೆಂಕಟರಮಣಯ್ಯ, ಶ್ರೀ ಕೃಷ್ಣ ಬೈರೇಗೌಡ ಮತ್ತು ಡಾ. ಕೆ. ಶ್ರೀನಿವಾಸಮೂರ್ತಿ ಅವರುಗಳು** – ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಅವೈಜ್ಞಾನಿಕವಾಗಿ ಘನತ್ಯಾಜ್ಯ ಸಂಸ್ಕರಣೆ ಮಾಡುತ್ತಿದ್ದು, ಇದರಿಂದಾಗಿ ವಾತಾವರಣ, ಜಲ ಕಲುಷಿತಗೊಂಡಿರುವುದರಿಂದ ಘನತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಥಗಿತಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಸಚಿವರ ಗಮನ ಸೆಳೆಯುವುದು.

2) **ಶ್ರೀ ಪಿ.ಟಿ. ಪರಮೇಶ್ವರ್ ನಾಯಕ್ ಅವರು** – ರಾಜ್ಯದಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಹೆಚ್ಚಳ ಮಾಡುವ ಬಗ್ಗೆ ಹಾಗೂ ಉಪನ್ಯಾಸಕರ ನೇಮಕಾತಿ ಪ್ರಕ್ರಿಯೆಯಲ್ಲಿ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರ ಗಮನ ಸೆಳೆಯುವುದು.

3) **ಶ್ರೀ ಡಿ.ಕೆ. ಶಿವಕುಮಾರ್ ಅವರು** – ಬೆಂಗಳೂರು ನಗರದಲ್ಲಿ ರಸ್ತೆಗಳ ಅಗಲೀಕರಣ ಮತ್ತು ಇತರೆ ಅಭಿವೃದ್ಧಿಗೆ ಸ್ಥಳೀಯ ಸಂಸ್ಥೆಗಳಿಂದ ಪಡೆದುಕೊಂಡಿರುವ ಖಾಸಗಿ ಜಮೀನಿಗೆ ಟಿ.ಡಿ.ಆರ್. ಅಥವಾ ಪರಿಹಾರ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀ ದೊಡ್ಡಗೌಡರ ಮಹಾಂತೇಶ್ ಬಸವಂತರಾಯ ಅವರು** – ಕಿತ್ತೂರು ಕರ್ನಾಟಕ ಅಭಿವೃದ್ಧಿ ಮಂಡಳಿ ರಚಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5) **ಶ್ರೀ ವೆಂಕಟರಾವ್ ನಾಡಗೌಡ ಅವರು** – ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಭತ್ತ ಮತ್ತು ಜೋಳ ಖರೀದಿ ಕೇಂದ್ರವನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

6) **ಡಾ. ಜಿ. ಪರಮೇಶ್ವರ್ ಅವರು** – ರಾಜ್ಯದ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ ಸ್ಥಾಪಿಸಲಾಗಿರುವ ನಿಗಮಗಳಲ್ಲಿ ವಿಶೇಷವಾಗಿ ಮೀಸಲು ಕ್ಷೇತ್ರಗಳ ಜನರ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನವನ್ನು ಮತ್ತು ಗುರಿಯ ಪ್ರಮಾಣವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7) **ಶ್ರೀ ರಾಜಾ ವೆಂಕಟಪ್ಪ ನಾಯಕ್ ಅವರು** – ಮಾನ್ವಿ ತಾಲ್ಲೂಕಿನ ಧೋತರ ಬಂಡಿ–ಉಟಕನೂರು ಮಧ್ಯದಲ್ಲಿರುವ ಸೇತುವೆ ಭಾರಿ ಮಳೆಯಿಂದ ಕೊಚ್ಚಿಹೋಗಿದ್ದು, ಪುನರ್ ನಿರ್ಮಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

... 4/ ..

8) **ಶ್ರೀ ನಾಗನಗೌಡ ಕಂದಕೂರು ಅವರು** – ಗುರುಮಿಠಕಲ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಿವಿಧ ಗ್ರಾಮಗಳ ರೈತರ ಜಮೀನುಗಳನ್ನು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯವರು ಕೈಗಾರಿಕೆಗಳ ಸ್ಥಾಪನೆಗಾಗಿ ಒತ್ತುವರಿ ಮಾಡಿಕೊಳ್ಳಲು ನೋಟೀಸ್ ನೀಡುತ್ತಿರುವುದರಿಂದ ಸ್ಥಳೀಯ ರೈತರು ಆತಂಕಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

9) **ಶ್ರೀ ಪ್ರಿಯಾಂಕ ಖರ್ಗೆ ಅವರು** – ಚಿತ್ತಾಪುರ ವ್ಯಾಪ್ತಿಯಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನ ವಸತಿ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

10) **ಡಾ. ಕೆ. ಅನ್ನದಾನಿ ಅವರು** – ಮಳವಳ್ಳಿ ತಾಲ್ಲೂಕಿನ ಹಲಗೂರು ಹೋಬಳಿಯ ವ್ಯಾಪ್ತಿಯಲ್ಲಿ ರೈತರಿಗೆ ಅನುಕೂಲವಾಗುವಂತೆ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

11) **ಶ್ರೀ ಬಂಡೆಪ್ಪ ಖಾಶೆಂಪೂರ ಅವರು** – ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮಕ್ಕೆ ಹಂಚಿಕೆ ಮಾಡಲಾದ ಅನುದಾನವನ್ನು ಕಡಿತಗೊಳಿಸಿ ಪರಿಷ್ಕೃತ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

12) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಹೊಸದುರ್ಗ ತಾಲ್ಲೂಕಿನ ವ್ಯಾಪ್ತಿಯ ವಾಣಿ ವಿಲಾಸ ಜಲಾಶಯದ ಹಿನ್ನೀರಿನ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಿಗೆ ಕುಡಿಯುವ ನೀರನ್ನು ಒದಗಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

13) **ಶ್ರೀ ಕೆ. ರಘುಪತಿ ಭಟ್ ಅವರು** – ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದವರಿಗೆ ಮಂಜೂರಾದ ಜಮೀನುಗಳನ್ನು ಮಾರಾಟಕ್ಕೆ ಅವಕಾಶ ಕಲ್ಪಿಸದೆ ಸ್ವಂತ ವ್ಯವಹಾರಕ್ಕೆ ವಾಣಿಜ್ಯ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ರವೀಂದ್ರ ಶ್ರೀಕಂಠಯ್ಯ ಇವರು – ಶ್ರೀರಂಗಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೆ, ಪೋಡಿ, ನಕಾಶೆಗಳು ದೊರಕದೇ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ದಿನಾಂಕ:13.12.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm